# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ರೇಣುಕಮ್ಮ, ಹಿಂದಿನ ಅಧ್ಯಕ್ಷರು (ಹಾಲಿ ಸದಸ್ಯರು) ಮುಣಬಘಟ್ಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 43(ಎ)ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1. ಉಪನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅಸ.ಪ.ಸಂಖ್ಯೆ: Compt/Uplok/BD-1283/2015/DRE-1 ದಿನಾಂಕ:12-02-2016.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:15-04-2016ರ ಕಾರಣ ಕೇಳುವ ನೋಟೀಸು.
3. ಶ್ರೀಮತಿ ರೇಣುಕಮ್ಮ, ಹಿಂದಿನ ಅಧ್ಯಕ್ಷರು ಹಾಲಿ ಸದಸ್ಯರು, ಮುಣಬಘಟ್ಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ದಿನಾಂಕ:04-05-2016 ಮತ್ತು 29-11-2016ರ ಲಿಖಿತ ಹೇಳಿಕೆಗಳು.
4. ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ, ದಿನಾಂಕ 15.12.2016

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ:12-02-2016ರ ಉಪನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ರವರ ಅರೆ ಸರ್ಕಾರಿ ಪತ್ರದಲ್ಲಿ ಮಾನ್ಯ ಉಪಲೋಕಾಯುಕ್ತರು ದಿನಾಂಕ:10-02-2016 ರಂದು ಕರ್ನಾಟಕ ಲೋಕಾಯುಕ್ ಕಾಯ್ದೆ 1984ರ ಕಲಂ (3)ರನ್ವಯ ಸಲ್ಲಿಸಿರುವ ವರದಿಯಲ್ಲಿ ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕು ಮುಣಬಘಟ್ಟ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಮಾಜಿ ಅಧ್ಯಕ್ಷರಾದ ಶ್ರೀಮತಿ ರೇಣುಕಮ್ಮ, ಇವರ ವಿರುದ್ಧ ಮುಣಬಘಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಸಾರ್ವಜನಿಕರು ಸಲ್ಲಿಸಿದ ದೂರಿನ ಅನುಸಾರವಾಗಿ ಲೋಕಾಯುಕ್ತ ಸಂಸ್ಥೆಯು ನಡೆಸಿದ ತನಿಖೆಯಲ್ಲಿ ಈ ಕೆಳಕಂಡ ಆಪಾದನೆಗಳು ಸಾಬೀತಾಗಿರುತ್ತವೆಂದು ತಿಳಿಸಿರುತ್ತಾರೆ.

*ಅ) "ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕು ಮುಣಬಘಟ್ಟ ಗ್ರಾಮದಿಂದ ಉಚ್ಚಂಗಿದುರ್ಗದ ರಸ್ತೆ ಕಡೆಗೆ (ಚನ್ನಾಪುರ ಗ್ರಾಮದವರೆಗೆ) 2009-10ನೇ ಸಾಲಿನಲ್ಲಿ ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರ ಯೋಜನೆಯಡಿ 1.4 ಕಿ.ಮೀ. ಉದ್ದದ ಡಾಂಬರ್ ರಸ್ತೆಯನ್ನು ದಿ:30-12-2009 ರಂದು ಪೂರ್ಣಗೊಳಿಸಿದ್ದು, ಪುನ: 2011-12ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಸೇರಿಸಿ, ಕಾಮಗಾರಿಯನ್ನು ಮಾಡಿಸದೇ ಕರ್ತವ್ಯಲೋಪ ಎಸಗಿದ್ದಾರೆ.*

*ಆ) 2ನೇ ಎದುರುದಾರರು ಅಧ್ಯಕ್ಷರಾಗಿದ್ದು, ಮತ್ತು 3ನೇ ಎದುರುದಾರರು ಗ್ರಾಮ ಪಂಚಾಯಿತಿ ಮೇಲ್ಕಂಡ ಕಾಮಗಾರಿಗೆ ಅಂದಾಜು ಮೊತ್ತ ರೂ.10.00ಲಕ್ಷಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ ಹಣ ದುರುಪಯೋಗಕ್ಕೆ ಜವಾಬ್ದಾರರಾಗಿರುತ್ತಾರೆ.*

ಅದರಂತೆ 2ನೇ ಎದುರುದಾರರಾದ ಶ್ರೀಮತಿ ರೇಣುಕಮ್ಮ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಮುಣಬಘಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ಇವರ ವಿರುದ್ಧ ಸಂಚಾಯತ್ ರಾಜ್ ಕಾಯಿದೆಯನ್ವಯ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಶ್ರೀಮತಿ ರೇಣುಕಮ್ಮ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಮುಣಬಘಟ್ಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರಿಗೆ 15-04-2016 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ಲಿಖಿತ ಹೇಳಿಕೆ ನೀಡಿ, ಸರ್ಕಾರದ ಕೆಲಸಗಳನ್ನು ಮಾಡುವ ಅಧಿಕಾರ ತಾಂತ್ರಿಕ ವಿಭಾಗಗಕ್ಕೆ ಇದ್ದು, ತಾಂತ್ರಿಕ ವಿಭಾಗದಲ್ಲಿ ಕೈಗೊಳ್ಳುವ ಕೆಲಸಗಳ ಬಗ್ಗೆ ಜನಪ್ರತಿನಿಧಿಗಳಿಗೆ ಅಧಿಕಾರಿಗಳು ಮಾಹಿತಿ ನೀಡುತ್ತಿರುತ್ತಾರೆ. ಕೆಲಸವಾಗಿರುವ ಅದೇ ಕೆಲಸಕ್ಕೆ ಪುನ: ಕ್ರಿಯಾ ಯೋಜನೆ ತಯಾರಿಸಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುತ್ತೇನೆಂದು ಆಪಾದಿಸಿರುವ ಅಂಶಗಳು ನಿಜವಾದವುಗಳಲ್ಲ. ಆ ಎಲ್ಲಾ ಅಂಶಗಳನ್ನು ಕೇವಲ ತನ್ನ ವಿರುದ್ಧದ ತೇಜೋವಧೆಗಾಗಿ ಸೃಷ್ಟಿಸಿಕೊಂಡ ಅಂಶವಾಗಿರುತ್ತದೆ. ತಾನು ಅತ್ಯಂತರ ಸಾಮಾಜಿಕ ಕಳಕಳಿ

ಹೊಂದಿದ ಕುಟುಂಬದಿಂದ ಬಂದಿದ್ದು, ಜನರು ನೀಡಿದ ಅಧಿಕಾರವನ್ನು ಜನತೆಯ ಒಳಿತಿಗಾಗಿ ಮೀಸಲಿಡಬೇಕೆಂಬ ಉದ್ದೇಶ ಹೊಂದಿ ಎಲ್ಲಾ ಕಾರ್ಯಗಳನ್ನು ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳ ವಿಶ್ವಾಸದೊಂದಿಗೆ ಮಾಡಿಕೊಂಡು ತನ್ನ ಅಧ್ಯಕ್ಷ ಹುದ್ದೆ ಅವಧಿಯನ್ನು ಪೂರೈಸಿರುತ್ತೇನೆ. ತಾನು ಗ್ರಾಮೀಣ ಭಾಗದಿಂದ ಬಂದಿದ್ದು, ತನಗೆ ವೈಯಕ್ತಿಕವಾಗಿ ಅಂತಹ ಶಿಕ್ಷಣವನ್ನು ಪಡೆಯದೇ ಇರುವ ವ್ಯಕ್ತಿಯಾಗಿದ್ದು, ತಾನು ಅಧ್ಯಕ್ಷೆಯಾದರೂ ಕೂಡಾ ಎಲ್ಲದಕ್ಕೂ ಸಂಬಂಧಿಸಿದ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ ಅವರು ನೀಡುವ ಎಲ್ಲಾ ರೀತಿಯ ಸಹಾಯ ಸಹಕಾರಕ್ಕೆ ತಾನು ಕೂಡಾ ಸಹಕಾರ ನೀಡಿ ಕೆಲಸ ಕಾರ್ಯಗಳನ್ನು ಪೂರೈಸಿಕೊಂಡು ಬಂದಿರುತ್ತೇನೆ. ತಾನು ಯಾವುದೇ ಹಣವನ್ನು ದುರುಪಯೋಗ ಪಡಿಸಿಕೊಂಡಿರುವುದಿಲ್ಲ ಮತ್ತು ಸರ್ಕಾರಕ್ಕೆ ಅನ್ಯಾಯ ಮಾಡಿರುವುದಿಲ್ಲ ಹಾಗೂ ತಾನು ತನ್ನ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡಿರುವುದಿಲ್ಲ. ಆದ್ದರಿಂದ ತನ್ನ ಮೇಲೆ ಯಾವುದೇ ರೀತಿಯಿಂದಲೂ ಕಾನೂನು ಕ್ರಮ ಜರುಗಿಸದೇ ಪ್ರಕರಣವನ್ನು ಮುಕ್ತಾಯಗೊಳಿಸಬೇಕಾಗಿ ಹಾಗೂ ದಾವಣಗೆರೆ ಜಿಲ್ಲಾ ನ್ಯಾಯಾಲಯವು ನೀಡಬಹುದಾದ ಆದೇಶದ ಬಗ್ಗೆ ಆದೇಶವಾದ ನಂತರ ಅದನ್ನು ತಮ್ಮ ಗಮನಕ್ಕೆ ತರುತ್ತೇನೆ. ತನ್ನ ಮೇಲೆ ಹೊರಿಸಿರುವ ಆಪಾದನೆಗಳಿಂದ ತನ್ನನ್ನು ಬಿಡುಗಡೆ ಮಾಡಬೇಕೆಂದು ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ, ಶ್ರೀಮತಿ ರೇಣುಕಮ್ಮ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಪುಣಬಘಟ್ಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ನೀಡಿರುವ ಲಿಖಿತ ಹೇಳಿಕೆ ಹಾಗೂ ದಿನಾಂಕ 09.01.2017 ಮತ್ತು ದಿನಾಂಕ 19.08.2017 ರಂದು ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ವಿಚಾರಣಾ ಸಂದರ್ಭದಲ್ಲಿನ ಸಾಕ್ಷ್ಯಾಧಾರ ಹೇಳಿಕೆಗಳನ್ನು ಸರ್ಕಾರವು ಪರಿಶೀಲಿಸಿದ್ದು, ಶ್ರೀಮತಿ ರೇಣುಕಮ್ಮ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಪುಣಬಘಟ್ಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಸರ್ಕಾರದ ಹಣ ದುರುಪಯೋಗಪಡಿಸಿಕೊಂಡು ದುರ್ನಡತೆ ಎಸಗಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಇವರನ್ನು ಪುಣಬಘಟ್ಟ ಗ್ರಾಮ ಪಂಚಾಯಿತಿಯ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 270 ಗ್ರಾಪಂಅ 2016 ಬೆಂಗಳೂರು, ದಿನಾಂಕ:13.10.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರ ಯೋಜನೆಯಡಿ ಕಾಮಗಾರಿ ಅನುಷ್ಠಾನದಲ್ಲಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡು ದುರ್ನಡತೆ ಎಸಗಿರುವುದು ಲೋಕಾಯುಕ್ತ ಪ್ರಕರಣದಲ್ಲಿ ಸಾಬೀತಾಗಿರುವ ಹಿನ್ನೆಲೆಯಲ್ಲಿ, ಶ್ರೀಮತಿ ರೇಣುಕಮ್ಮ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಪುಣಬಘಟ್ಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43-ಎ ರಂತೆ ದಾವಣಗೆರೆ ಜಿಲ್ಲೆ ಹರಪನಹಳ್ಳಿ ತಾಲ್ಲೂಕು ಪುಣಬಘಟ್ಟ ಗ್ರಾಮ ಪಂಚಾಯಿತಿಯ ಸದಸ್ಯತ್ವದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

13/10

(ಟಿ.ವಿ. ಅರುಣ್‌ಕುಮಾರ್),
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಜಿಲ್ಲೆ.
3. ಉಪನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
5. ಶ್ರೀಮತಿ ರೇಣುಕಮ್ಮ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಪುಣಬಘಟ್ಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.

6. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯಿತಿ, ಮಣಬಘಟ್ಟ ಗ್ರಾಮ ಪಂಚಾಯಿತಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
7. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.